**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**<u>ಸಿ.ಸಿ.ನಂ. 699/2019</u>**

**ದಿನಾಂಕಃ 25.11.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು ಃ | ಕೃಷ್ಣಪ್ಪ | ಚಾಸಾ-10, ಪ್ರಾಸ.-6 |
| ತಂದೆಯ ಹೆಸರು ಃ | ಹನುಮಂತಪ್ಪ | |
| ವಯಸ್ಸು ಃ | 45 ವರ್ಷ | |
| ಉದ್ಯೋಗ ಃ | ಕೂಲಿ | |
| ವಾಸ ಃ | ಹಿರೇನಲ್ಲೂರು | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ನನಗೆ ಚಾಸಾ-1 ಮತ್ತು 9 ರವರು ಗೊತ್ತು. ಆರೋಪಿತರು ನನಗೆ ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲಾ. ನಾನು ಕೆಲಸಕ್ಕೆ ಹೋಗಿ ಬರುತ್ತಿರುವಾಗ ಪೋಲಿಸರು ಸಹಿ ಮಾಡು ಎಂದು ತಿಳಿಸಿದ ಮೇರೆಗೆ ಸಹಿ ಮಾಡಿರುತ್ತೇನೆ. ಸಾಕ್ಷಿಗೆ ನಿಪಿ-3 ರ ಮಹಜರನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಹಾಕಿರುತ್ತೇನೆ ಎಂದು ನನಗೆ ತಿಳಿದಿಲ್ಲ. ನನ್ನ ಜೊತೆ ಚಾಸಾ-9 ರವರು ಸಹಿ ಮಾಡಿರುತ್ತಾರೆ. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿಲ್ಲ. ಸಾಕ್ಷಿಗೆ ನಿಪಿ-4 ಮತ್ತು 5 ರ ಛಾಯಾಚಿತ್ರವನ್ನು ತೋರಿಸಲಾಗಿ ಅದರಲ್ಲಿ ತಾನು ಇರುವುದಾಗಿ ಗುರುತಿಸಿರುತ್ತಾರೆ. ಸಾಕ್ಷಿಗೆ ನ್ಯಾಯಾಲಯದ ಮುಂದಿರುವ ಇಟ್ಟಿಗೆ ಮತ್ತು ಒಂದು ಒಡೆದ ಗಾಜಿನ ಬಾಟಲನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿರುತ್ತಾರೆ, ಅವುಗಳನ್ನು ಕ್ರಮವಾಗಿ ಮುಮಾ-1 ಮತ್ತು 2 ಎಂದು ಗುರುತಿಸಲಾಯಿತು. ಅವುಗಳನ್ನು ಯಾವ ಸಂದರ್ಬದಲ್ಲಿ ಮತ್ತು ಯಾವ ವಿಚಾರಕ್ಕೆ ಪೋಲಿಸರು ವಶಪಡಿಸಿಕೊಂಡರು ಎಂದು ನನಗೆ ತಿಳಿದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

<u>ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ</u>

ದಿಃ 21.06.2017 ರಂದು ಸಂಜೆ 5.30 ಗಂಟೆ ಸಮಯದಲ್ಲಿ ಆರೋಪಿತರು ಮತ್ತು ಚಾಸಾ-1 ಮತ್ತು 2 ರವರ ಮದ್ಯೆ ಗಲಾಟೆಯಾದ ಸ್ದಳದಲ್ಲಿ ಸ್ಥಳ ಮಹಜರ್ ಗೆ ಸಹಕರಿಸುವಂತೆ ಕೋರಿ ನನಗೆ ಮತ್ತು ಚಾಸಾ-9 ರವರಿಗೆ ಕೋರಿಕೊಂಡಿದ್ದರು ಎಂದರೆ ಸರಿಯಲ್ಲ. ದಿಃ 24.06.2017 ರಂದು ಪೋಲಿಸರು ಮಹಜರ್ ಕ್ರಮ ಜರುಗಿಸಲು ಬಂದಿದ್ದು, ಗಲಾಟೆಯಾದ ಸ್ಥಳದಲ್ಲಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಮಧ್ಯಾಹ್ನ 12.00 ರಿಂದ 1.00 ಗಂಟೆವರೆಗೆ ಮಹಜರ್ ಕ್ರಮ ಜರುಗಿಸಿ ಆರೋಪಿತರು ಹೊಡೆಯಲು ಉಪಯೋಗಿಸಿದ ಮುಮಾ-1 ಮತ್ತು 2 ನ್ನು ಮುಂದಿನ ಕ್ರಮಕ್ಕಾಗಿ ಪೋಲಿಸರು

ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-4 ಮತ್ತು 5 ರಂತೆ ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಎ ಒ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.